ದಿನಾಂಕ 06-01-2024 ಅಸಲು ದಾವಾ ಸಂ.414/2022

ಪಿ.ಡಬ್ಲ್ಯೂ-1

ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು

**ಮುಖ್ಯ ವಿಚಾರಣೆ : ವಾದಿ ಪರ ಶ್ರೀ.R D S ವಕೀಲರಿಂದಃ-**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು, ಅದರಲ್ಲಿರುವ ಎಲ್ಲ ಸಂಗತಿಗಳು ಸರಿ ಹಾಗೂ ಸತ್ಯವಿರುತ್ತವೆ ಮತ್ತು ನನಗೆ ತಿಳಿದಿರುತ್ತವೆ.

ಕೈಗಡ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ಅದರಲ್ಲಿರುವ ಪ್ರತಿವಾದಿಯ ಸಹಿಯನ್ನು ನಿಪಿ-1 ಎ ಅಂತಾ, ಪ್ರತಿವಾದಿಗೆ ನನ್ನ ವಕೀಲರ ಮೂಲಕ ನೀಡಿದ ನೋಟೀಸಿನ ಕಚೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ಒಂದು ಅಂಚೆ ರಶೀದಿ ಮತ್ತು ಅದರ ಸ್ವೀಕೃತ ಪತ್ರವನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-3 ಮತ್ತು ನಿಪಿ-4 ಎಂದು, ಪ್ರತಿವಾದಿ ನೀಡಿದ ಉತ್ತರದ ನೋಟೀಸನ್ನು ಹಾಜರುಪಡಿಸಿದ್ದು ಅದನ್ನು ನಿಪಿ-5 ಎಂದು ಗುರುತಿಸಲಾಯಿತು.

ಮೇಲಿನ ನನ್ನ ಸಾಕ್ಷಿಯನ್ನು ಪರಿಗಣಿಸಿ ಮುಖ್ಯ ವಿಚಾರಣೆಯಲ್ಲಿ ಕೇಳಿದಂತೆ ದಾವೆಯನ್ನು ಡಿಕ್ರೀ ಮಾಡಬೇಕೆಂದು ಪ್ರಾರ್ಥಿಸಿಕೊಳ್ಳುತ್ತೇನೆ.

**ಪಾಟೀ ಸವಾಲು : ಪ್ರತಿವಾದಿ ಪರ ಶ್ರೀ.ಆರ್ ವೈ ಎಚ್ ವಕೀಲರಿಂದಃ-**

ಪ್ರತಿವಾದ ಪತ್ರ ಸಲ್ಲಿಸದ ಕಾರಣ ಪಾಟೀಸವಾಲು ಇಲ್ಲಾ ಅಂತಾ ತೆಗೆದುಕೊಳ್ಳಲಾಯಿತು.

ಮರುವಿಚಾರಣೆಃ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ನಿರ್ದೇಶನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇ.ಕೇ.ಸರಿ ಅದೆ.

Sd/-

ದಿವಾಣಿ ನ್ಯಾಯಾಧೀಶರು ಮತ್ತು

ಪ್ರ.ದ.ನ್ಯಾ. ದಂ., ಬನಹಟ್ಟಿ.